**ಸಾಕ್ಷಿಯನ್ನು ದಿಃ 19.04.2022 ರಂದು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆಃ ಶ್ರೀ ಎನ್.ಎಸ್. ವಕೀಲರಿಂದಃ**

ಈಗ ನಾನು ನನ್ನ ಮುಖ್ಯ ವಿಚಾರಣೆಯನ್ನು ಪ್ರಮಾಣಪತ್ರದ ಮೂಲಕ ನ್ಯಾಯಾಲಯಕ್ಕೆ ಸಲ್ಲಿಸುತ್ತಿದ್ದೇನೆ. ಹಾಗೂ ಅದರಲ್ಲಿ ಬರೆದಿರುವ ಎಲ್ಲಾ ಅಂಶಗಳು ನನಗೆ ತಿಳಿದಿರುತ್ತವೆ ಮತ್ತು ಸಂಗತಿಗಳು ಸತ್ಯವಾಗಿರುತ್ತವೆ ಮತ್ತು ನಾನು ಅದಕ್ಕೆ ಸಹಿಯನ್ನು ಹಾಕಿರುತ್ತೇನೆ.

ನಾನು ಕೆಲವೊಂದು ದಾಖಲೆಗಳನ್ನು ಹಾಜರು ಪಡಿಸಿದ್ದು, ಅವುಗಳನ್ನು ನೋಡಿದರೆ ಗುರುತಿಸುತ್ತೇನೆ.

ಸಾಕ್ಷಿಯು ನೋಂದಾಯಿತ ಖರೀದಿ ಪತ್ರದ ದೃಢೀಕೃತ ನಕಲನ್ನು ನೋಡಿ ಗುರುತಿಸಿದ್ದು, ಅದನ್ನು ನಿ ಪಿ 1 ಎಂದು ಗುರುತಿಸಲಾಯಿತು. ಸರ್ವೇ ನಂಬರ್ 44/1 ರ 6 ಆರ್.ಟಿ.ಸಿ. ಗಳನ್ನು ಸಾಕ್ಷಿ ನೋಡಿ ಗುರುತಿಸಿದ್ದು, ಅವುಗಳನ್ನು ನಿ ಪಿ 2 ರಿಂದ 7 ಎಂದು ಗುರುತಿಸಲಾಯಿತು. ಆಕಾರ್ ಬಂದ್ ಅನ್ನು ಸಾಕ್ಷಿ ನೋಡಿ ಗುರುತಿಸಿದ್ದು, ಅದನ್ನು ನಿ ಪಿ 8 ಎಂದು ಗುರುತಿಸಲಾಯಿತು. ಸರ್ವೇ ನಂಬರ್ 44/1 ರ ನಕ್ಷೆಯನ್ನು ಸಾಕ್ಷಿ ನೋಡಿ ಗುರುತಿಸಿದ್ದು, ಅದನ್ನು ನಿ ಪಿ 9 ಎಂದು ಗುರುತಿಸಲಾಯಿತು. ಎಂ.ಆರ್. ನಂಬರ್. ಹೆಚ್38/2012-13 ರ ಮುಟೇಷನ್ ರಿಜಿಸ್ಟರ್ ಪ್ರತಿಯನ್ನು ಸಾಕ್ಷಿ ನೋಡಿ ಗುರುತಿಸಿದ್ದು, ಅದನ್ನು ನಿ ಪಿ 10 ಎಂದು ಗುರುತಿಸಲಾಯಿತು. ನಕ್ಷೆ ಮತ್ತು ಹಿಂಬರಹವನ್ನು ಸಾಕ್ಷಿ ನೋಡಿ ಗುರುತಿಸಿದ್ದು, ಅದನ್ನು ನಿ ಪಿ 11 ಎಂದು ಗುರುತಿಸಲಾಯಿತು. ಅಧ್ಯಕ್ಷರು, ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಯವರಿಗೆ ಮೃತ ವಾದಿ ಕೃಷ್ಣಪ್ಪ ಬರೆದಿರುವ ತಕರಾರನ್ನು ಸಾಕ್ಷಿ ನೋಡಿ ಗುರುತಿಸಿದ್ದು, ಅದನ್ನು ನಿ ಪಿ 12 ಎಂದು ಗುರುತಿಸಲಾಯಿತು. ಸರ್ವೇ ಸ್ಕೆಚ್ ಅನ್ನು ಸಾಕ್ಷಿ ನೋಡಿ ಗುರುತಿಸಿದ್ದು, ಅದನ್ನು ನಿ ಪಿ 13 ಎಂದು ಗುರುತಿಸಲಾಯಿತು. ಅಧ್ಯಕ್ಷರು, ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳಿಗೆ ಮೃತ ವಾದಿ ಕೃಷ್ಣಪ್ಪ ನೀಡಿದ ದೂರಿನ ಪ್ರತಿಯನ್ನು ಸಾಕ್ಷಿ ನೋಡಿ ಗುರುತಿಸಿದ್ದು, ಅದನ್ನು ನಿ ಪಿ 14 ಎಂದು ಗುರುತಿಸಲಾಯಿತು. ಅಧ್ಯಕ್ಷರು, ಪಂಚಾಯಿತಿ

ಅಭಿವೃದ್ಧಿ ಅಧಿಕಾರಿಗಳಿಗೆ ಮೃತ ವಾದಿ ಕೃಷ್ಣಪ್ಪ ನೀಡಿದ ದೂರಿನ ಪ್ರತಿಯನ್ನು ಸಾಕ್ಷಿ ನೋಡಿ ಗುರುತಿಸಿದ್ದು, ಅದನ್ನು ನಿ ಪಿ 15 ಎಂದು ಗುರುತಿಸಲಾಯಿತು.

**ಮುಂದುವರೆದ ಮುಖ್ಯ ವಿಚಾರಣೆಗೆ ವಕೀಲರು ಕಾಲಾವಕಾಶ ಕೋರಿದ್ದು, ಅದರಂತೆ ಕಾಲಾವಕಾಶ ನೀಡಿ ಮುಂದೂಡಲಾಯಿತು.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಗಣಕೀಕೃತ ಮಾಡಲಾಗಿದೆ.)

ಓ ಹೇ ಕೇ ಸರಿ ಇದೆ.

**(ಅಜಿತ್ ದೇವರಮನಿ)**
**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ,**
**ಬಂಗಾರಪೇಟೆ**